ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

ಸಂಖ್ಯೆ: ಇಡಿ/ಕೆಇಎ/ತಿದ್ದುಪಡಿ/2024 ದಿನಾಂಕ: 07-05-2024

**ಪ್ರಕಟಣೆ – ಸಿಇಟಿ-2024ಕ್ಕೆ ಆನ್‌ಲೈನ್ ಅರ್ಜಿಯಲ್ಲಿ ನೀಡಿರುವ ಆರ್‌ಡಿ ಸಂಖ್ಯೆಗಳನ್ನು ಹಾಗು ಇತರೆ ಕ್ಲೇಮ್ಸ್‌ಗಳನ್ನು ತಿದ್ದುಪಡಿ ಮಾಡಿಕೊಳ್ಳಲು – ಅಂತಿಮ ಅವಕಾಶ**

(ದಿನಾಂಕ **09-05-2024** ರ ಬೆ. **11.00** ರಿಂದ ದಿನಾಂಕ **15-05-2024** ರ ರಾತ್ರಿ 11.59 ರ ವರೆಗೆ)

1. ಸಿಇಟಿ-2024ರ ಆನ್‌ಲೈನ್ ಅರ್ಜಿಯಲ್ಲಿ ಆರ್‌ಡಿ ಸಂಖ್ಯೆಗಳನ್ನು ತಿದ್ದುಪಡಿ ಮಾಡಿಕೊಳ್ಳಲು ಅನೇಕ ಅಭ್ಯರ್ಥಿಗಳು ಮನವಿ ಸಲ್ಲಿಸುತ್ತಿದ್ದಾರೆ. ಈ ಹಿನ್ನಲೆಯಲ್ಲಿ ಅಭ್ಯರ್ಥಿಗಳ ಮನವಿಯನ್ನು ಗಮನಿಸಿ ಆರ್‌ಡಿ ಸಂಖ್ಯೆಗಳನ್ನು ಹಾಗು ಇತರೆ ಕ್ಲೇಮ್ಸ್‌ಗಳನ್ನು ತಿದ್ದುಪಡಿ ಮಾಡಿಕೊಳ್ಳಲು ದಿನಾಂಕ **09-05-2024** ರ ಬೆ. **11.00** ರಿಂದ ದಿನಾಂಕ **15-05-2024** ರ ರಾತ್ರಿ 11.59 ರ ವರೆಗೆ **ಅಂತಿಮ ಅವಕಾಶ ನೀಡಲಾಗುತ್ತಿದೆ. ಈ ಮೇಲಿನ ನಿಗದಿತ ದಿನಾಂಕದ ನಂತರ ಆರ್‌ಡಿ ಸಂಖ್ಯೆಯನ್ನು / ಇತರೆ ಕ್ಲೇಮ್ಸ್‌ಗಳನ್ನು ಬದಲಾಯಿಸಿಕೊಳ್ಳಲು ಅವಕಾಶ ನೀಡುವಂತೆ ಸಲ್ಲಿಸುವ ಮನವಿಗಳನ್ನು ಪುರಸ್ಕರಿಸುವುದಿಲ್ಲ. ಆದ್ದರಿಂದ ಅಭ್ಯರ್ಥಿಗಳು ತಾವು ಆನ್‌ಲೈನ್ ಅರ್ಜಿಯಲ್ಲಿ ದಾಖಲಿಸಿರುವ ವಿವರಗಳನ್ನು / ಕ್ಲೇಮ್ಸ್‌ಗಳನ್ನು ಪರಿಶೀಲಿಸಿಕೊಳ್ಳಿ, ಅಗತ್ಯವಿದ್ದಲ್ಲಿ ಅರ್ಹತೆಯನುಸಾರ ಬದಲಾಯಿಸಿ;** ಅರ್ಹತಾ ಕಂಡಿಕೆ (ಸಿ ಮತ್ತು ಡಿ ಕ್ಲಾಸ್ ಬಿಟ್ಟು), ಪ್ರವರ್ಗ ಮೀಸಲಾತಿ, ವಾರ್ಷಿಕ ಆದಾಯ, ಹೈದರಾಬಾದ್ ಕರ್ನಾಟಕ ಮೀಸಲಾತಿ 371(j), ಕನ್ನಡ ಮಾಧ್ಯಮ, ಗ್ರಾಮೀಣ ಮಾಧ್ಯಮ, ವಿಶೇಷ ಪ್ರವರ್ಗಗಳು.
2. ಆನ್‌ಲೈನ್ ಅರ್ಜಿಯಲ್ಲಿ ಅಭ್ಯರ್ಥಿಯು ನಮೂದಿಸುವ ಜಾತಿ / ಜಾತಿ ಆದಾಯ ಪ್ರಮಾಣ ಪತ್ರದ ಆರ್‌ಡಿ ಸಂಖ್ಯೆಯನ್ನು ಮತ್ತು 371(ಜೆ) ಆರ್‌ಡಿ ಸಂಖ್ಯೆಯನ್ನು ಆಧರಿಸಿ ಅಭ್ಯರ್ಥಿಯ ಜಾತಿ, ಆದಾಯ ಮತ್ತು 371(ಜೆ) ಗೆ ಸಂಬಂಧಿಸಿದ ಮಾಹಿತಿಯನ್ನು ವೆಬ್‌ಸೇವೆಯ ಮೂಲಕ ಪಡೆಯಲಾಗುವುದು. ಅಭ್ಯರ್ಥಿಗಳು ಎಚ್ಚರದಿಂದ ಸರಿಯಾದ ಆರ್‌ಡಿ ಸಂಖ್ಯೆಯನ್ನು ಆನ್‌ಲೈನ್ ಅರ್ಜಿಯಲ್ಲಿ ದಾಖಲಿಸಲು ಸೂಚಿಸಿದೆ. ಒಂದು ವೇಳೆ ಅಭ್ಯರ್ಥಿಯು ದಾಖಲಿಸುವ ಆರ್‌ಡಿ ಸಂಖ್ಯೆ ತಾಳೆಯಾಗದಿದ್ದಲ್ಲಿ, ಸಂಬಂಧಿಸಿದ ಮೀಸಲಾತಿಗಳನ್ನು ಪಡೆಯಲು ಅರ್ಹತೆ ಹೊಂದುವುದಿಲ್ಲ. (ಆರ್‌ಡಿ ಸಂಬಂಧಿತ ಎಲ್ಲಾ ಪ್ರಮಾಣ ಪತ್ರಗಳಿಗೆ ಅನ್ವಯ)
3. ಎಸ್‌ಸಿ, ಎಸ್‌ಟಿ ಮತ್ತು ಪ್ರವರ್ಗ-1 ರ ಅಭ್ಯರ್ಥಿಗಳು ಶುಲ್ಕ ವಿನಾಯಿತಿಯ ಪ್ರಯೋಜನವನ್ನು ಪಡೆಯಲು ಆದಾಯ ಪ್ರಮಾಣ ಪತ್ರದ ಆರ್‌ಡಿ ಸಂಖ್ಯೆಯನ್ನು ಆನ್‌ಲೈನ್ ಅರ್ಜಿಯಲ್ಲಿ ಸರಿಯಾಗಿ ಎಚ್ಚರದಿಂದ ನಮೂದಿಸಬೇಕು.
4. ಗ್ರಾಮೀಣ ಮೀಸಲಾತಿಯನ್ನು ಪಡೆಯಲಿಚ್ಛಿಸುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ಅವರು ಓದಿದ ಶಾಲೆಯ / ಪ್ರೌಢಶಾಲೆಯ ಮುಖ್ಯಸ್ಥರಿಂದ ಪಡೆದ ಗ್ರಾಮೀಣ ವ್ಯಾಸಂಗ ಪ್ರಮಾಣ ಪತ್ರದ ಜೊತೆಗೆ ಸಂಬಂಧಪಟ್ಟ ತಹಸೀಲ್ದಾರರಿಂದ ಪಡೆದ ಆರ್‌ಡಿ ಸಂಖ್ಯೆ ಇರುವ ಪರಿಶೀಲನಾ ಪ್ರಮಾಣಪತ್ರವನ್ನು **Non Creamy Layer Certificate** (NCLC) ಸಹ ಪಡೆದು, ಆರ್‌ಡಿ ಸಂಖ್ಯೆಯನ್ನು ಆನ್‌ಲೈನ್ ಅರ್ಜಿಯಲ್ಲಿ ದಾಖಲಿಸಬೇಕು.
5. ಸಾಮಾನ್ಯ ವರ್ಗದ ಅಭ್ಯರ್ಥಿಗಳು ತಮ್ಮ ವಾರ್ಷಿಕ ಆದಾಯ ರೂ.8.00 ಲಕ್ಷಕ್ಕಿಂತ ಕಡಿಮೆ ಇದ್ದಲ್ಲಿ, ಸೂಪರ್ ನ್ಯೂಮರರಿ ಕೋಟದ ಸೀಟುಗಳಿಗೆ ಅರ್ಹತೆ ಪಡೆಯಲು ಸಂಬಂಧಿಸಿದ ತಹಶೀಲ್ದಾರ್‌ರವರಿಂದ ಆದಾಯ ಪ್ರಮಾಣ ಪತ್ರವನ್ನು ಪಡೆದು ಆದಾಯ ಪತ್ರದ ಆರ್‌ಡಿ ಸಂಖ್ಯೆಯನ್ನು ಆನ್‌ಲೈನ್ ಅರ್ಜಿಯಲ್ಲಿ ಸರಿಯಾಗಿ ಎಚ್ಚರದಿಂದ ನಮೂದಿಸಬೇಕು.

**18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012**
18th Cross, Sampige Road, Malleshwaram, Bengaluru - 560 012.
Phone: 080 - 23 564 583 Helpline : 080 - 23 460 460.
e-mail : keauthority-ka@nic.in Website : http://kea.kar.nic.in

6. ಹೈದರಾಬಾದ್ ಕರ್ನಾಟಕ ಪ್ರದೇಶದ ಮೀಸಲಾತಿ 371(j) ಪಡೆಯಲು ತಾವು ಅರ್ಹರಿದ್ದಲ್ಲಿ, ಅರ್ಜಿಯಲ್ಲಿ ಹೈದರಾಬಾದ್ ಕರ್ನಾಟಕದ ಅಂಕಣದಲ್ಲಿ ಸರಿಯಾದ ಆರ್‌ಡಿ ಸಂಖ್ಯೆಯನ್ನು ದಾಖಲಿಸಿದಲ್ಲಿ ಮಾತ್ರ ತಮಗೆ ಹೈದರಾಬಾದ್ ಕರ್ನಾಟಕ ಮೀಸಲಾತಿ ಪಡೆಯಲು ಅರ್ಹತೆಯನ್ನು ಪಡೆಯುತ್ತೀರ.

7. ಎನ್‌ಸಿಸಿ, ಕ್ರೀಡೆ, ಸಿಆರ್‌ಪಿಎಫ್, ಸಿಎಪಿಎಫ್, ಸೈನಿಕರು, ಮಾಜಿ ಸೈನಿಕರು, ಸ್ಕೌಟ್ಸ್ & ಗೈಡ್ಸ್, ವಿಕಲಚೇತನರು, ಮಾಜಿ ಸಿಎಪಿಎಫ್ ಮುಂತಾದ ವಿಶೇಷ ಪ್ರವರ್ಗಗಳಲ್ಲಿ ಅರ್ಹತೆ ಪಡೆಯಲು ಆನ್‌ಲೈನ್ ಅರ್ಜಿಯಲ್ಲಿ ಕ್ಲೇಮ್ ಮಾಡಿ, ಅಭ್ಯರ್ಥಿಗಳು ಸಂಬಂಧಿಸಿದ ಪ್ರಮಾಣ ಪತ್ರಗಳನ್ನು ಅಪ್‌ಲೋಡ್ ಮಾಡುವುದೂ ಸಹ ಅತ್ಯವಶ್ಯಕವಾಗಿರುತ್ತದೆ. ವಿಶೇಷ ವರ್ಗದ ಪ್ರಮಾಣ ಪತ್ರಗಳನ್ನು ಖುದ್ದಾಗಿ ಸಲ್ಲಿಸಲು ಅವಕಾಶ ಇರುವುದಿಲ್ಲ.

8. ಅಭ್ಯರ್ಥಿಗಳು ದಾಖಲಿಸುವ ವಿವರಗಳನ್ನು ಅಂದರೆ, ಶಾಲೆಗಳ ವ್ಯಾಸಂಗ, ಕನ್ನಡ ಮಾಧ್ಯಮ, ಜಾತಿ, ಆದಾಯ ಮುಂತಾದ ವಿವರಗಳನ್ನು SATS ಹಾಗು ಕಂದಾಯ ಇಲಾಖೆಯ ವೆಬ್‌ಸರ್ವೀಸ್ ಮುಖಾಂತರ ಆನ್‌ಲೈನ್ ಮೂಲಕವೇ ಪರಿಶೀಲಿಸಲಾಗುವುದು. ಭೌತಿಕವಾಗಿ ದಾಖಲೆಗಳ ಪರಿಶೀಲನೆ ಇರುವುದಿಲ್ಲ.

9. ವೈದ್ಯಕೀಯ / ದಂತ ವೈದ್ಯಕೀಯ ಪ್ರವೇಶಾತಿಗೆ ಅನ್ವಯಿಸುವಂತೆ, ಅಲ್ಪ ಸಂಖ್ಯಾತ ಮೀಸಲಾತಿಗಳನ್ನೂ ಸಹ ಕ್ಲೇಮ್ ಮಾಡಿಕೊಳ್ಳಬಹುದು.

**ತಿದ್ದುಪಡಿ ಮಾಡಿಕೊಳ್ಳಲು ಅನುಸರಿಸಬೇಕಾದ ಕ್ರಮ**

1. ಪ್ರಾಧಿಕಾರದ ವೆಬ್‌ಸೈಟಿನಲ್ಲಿ ನಿಗದಿತ ಲಿಂಕ್ ಅನ್ನು ಆಯ್ಕೆ ಮಾಡಿ ಅಭ್ಯರ್ಥಿಗಳ ಲಾಗಿನ್ ಮೂಲಕ ತಿದ್ದುಪಡಿ ಮಾಡಿಕೊಳ್ಳುವುದು.
2. ಲಿಂಕ್ ಆಯ್ಕೆ ಮಾಡಿದ ನಂತರ ಯಾವುದನ್ನು ಎಡಿಟ್ ಮಾಡಬೇಕು ಎಂಬುದನ್ನು ಸೆಲೆಕ್ಟ್ ಮಾಡಿ, ನಂತರ ಸಂಬಂಧಿಸಿದ ಅಂಕಣವನ್ನು ಆಯ್ಕೆ ಮಾಡಿ, (eligibility clause Update, RD details update, Course Update, Upload Documents, Reservation Claims, Special Category claims.) ಪರಿಶೀಲಿಸಿ ತಿದ್ದುಪಡಿ ಮಾಡಿ
3. Declaration button ಅನ್ನು ಆಯ್ಕೆ (Select) ಮಾಡುವ ಮೊದಲು ಪರಿಶೀಲಿಸಿ, ಒಂದು ಸಾರಿ Declaration button ಅನ್ನು ಆಯ್ಕೆ (Select) ಮಾಡಿದ ನಂತರ ಪುನಹ ತಿದ್ದುಪಡಿಮಾಡಿಕೊಳ್ಳಲು ಅವಕಾಶ ಇರುವುದಿಲ್ಲ.
4. ತಿದ್ದುಪಡಿ ಮಾಡಿಕೊಂಡ ನಂತರ ತಪ್ಪದೇ Declaration button ಅನ್ನು ಆಯ್ಕೆ (Select) ಮಾಡಿ ನಂತರ Final Submission ಅನ್ನು ಸಲ್ಲಿಸಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಬೇಕು. ತಪ್ಪಿದಲ್ಲಿ ಅಭ್ಯರ್ಥಿಗಳು ಅರ್ಜಿಯಲ್ಲಿ ಮೊದಲು ಸಲ್ಲಿಸಿದ ಮಾಹಿತಿಯನ್ನೇ ಮುಂದಿನ ಎಲ್ಲಾ ಪ್ರಕ್ರಿಯೆಗೆ ಪರಿಗಣಿಸಲಾಗುವುದು.
5. ನಂತರ ಮಾರ್ಪಡಿಸಿದ ಅರ್ಜಿಯನ್ನು ಮುದ್ರಿಸಿ ತಮ್ಮಲ್ಲಿ ಸುರಕ್ಷಿತವಾಗಿ ಇಟ್ಟುಕೊಳ್ಳಬೇಕು. ಮುದ್ರಿತ ಅರ್ಜಿಯ ಕನಿಷ್ಟ ಐದು ಪ್ರತಿಗಳು ತಮ್ಮಲ್ಲಿ ಇರುವುದು ಸೂಕ್ತ.

ಕಾರ್ಯನಿರ್ವಾಹಕ ನಿರ್ದೇಶಕರು